3. ಶಾಸನ ರಚನೆ

ವಿಧೇಯಕಗಳ ಮಂಡನೆ

ಕರ್ನಾಟಕ ಪೌರ ನಿಗಮಗಳ [ತಿದ್ದುಪಡಿ] ವಿಧೇಯಕ,2009

ಶ್ರೀ ಆರ್.ಅಶೋಕ್ [ಸಾರಿಗೆ ಸಚಿವರು, ಡಾ॥ ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಗಳ ಪರವಾಗಿ] :- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಪೌರ ನಿಗಮಗಳ [ತಿದ್ದುಪಡಿ] ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

2009ರ ಕರ್ನಾಟಕ ಪೌರ ನಿಗಮಗಳ [ತಿದ್ದುಪಡಿ] ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಆರ್. ಅಶೋಕ್ [ಸಾರಿಗೆ ಸಚಿವರು] :- ಮನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಪೌರ ನಿಗಮಗಳ [ತಿದ್ದುಪಡಿ] ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ಶಾಸನ ರಚನೆ

ಆ) ಕರ್ನಾಟಕ ವೈದ್ಯೋಪಚಾರ ಸಿಬ್ಬಂದಿಯ ಮೇಲೆ ಹಿಂಸಾಚಾರವನ್ನು ಮತ್ತು ವೈದ್ಯೋಪಚಾರ ಸಂಸ್ಥೆಗಳ ಆಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವ ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ರಾಮಚಂದ್ರಗೌಡ (ವೈದ್ಯಕೀಯ ಶಿಕ್ಷಣ ಸಚಿವರು):- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ವೈದ್ಯೋಪಚಾರ ಸಿಬ್ಬಂದಿಯ ಮೇಲೆ ಹಿಂಸಾಚಾರವನ್ನು ಮತ್ತು ವೈದ್ಯೋಪಚಾರ ಸಂಸ್ಥೆಗಳ ಆಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ವೈದ್ಯೋಪಚಾರ ಸಿಬ್ಬಂದಿಯ ಮೇಲೆ ಹಿಂಸಾಚಾರವನ್ನು ಮತ್ತು ವೈದ್ಯೋಪಚಾರ ಸಂಸ್ಥೆಗಳ ಆಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವ ವಿಧೇಯಕ" ವನ್ನು ಮಂಡಿಸಲು ಅನುಮತಿ ನೀಡುವುದು .

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ರಾಮಚಂದ್ರಗೌಡ (ವೈದ್ಯಕೀಯ ಶಿಕ್ಷಣ ಸಚಿವರು) :- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ವೈದ್ಯೋಪಚಾರ ಸಿಬ್ಬಂದಿಯ ಮೇಲೆ ಹಿಂಸಾಚಾರವನ್ನು ಮತ್ತು ವೈದ್ಯೋಪಚಾರ ಸಂಸ್ಥೆಗಳ ಆಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ಶಾಸನ ರಚನೆ

ಇ) ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ,2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :- ಮಾನ್ಯ ಅಧ್ಯಕ್ಷರೆ, 2009ರ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

" 2009ರ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ವಿದೇಯಕ" ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಕರುಣಾಕರರೆಡ್ಡಿ (ಕಂದಾಯ ಸಚಿವರು) :- ಮಾನ್ಯ ಅಧ್ಯಕ್ಷರೆ, 2009ರ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿದೇಯಕವನ್ನು ಮಂಡಿಸಲಾಗಿದೆ.